ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1149 (1346)
ಸದಸ್ಯರ ಹೆಸರು	:	ಡಾ|| ವೈ.ಎ.ನಾರಾಯಣಸ್ವಾಮಿ
ಉತ್ತರಿಸುವ ದಿನಾಂಕ	:	18.03.2020
ಉತ್ತರಿಸುವ ಸಚಿವರು	:	ಉಪ ಮುಖ್ಯಮಂತ್ರಿಗಳು, ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು

ಕ್ರ. ಸಂ	ವಿಷಯ	ಉತ್ತರ
ಅ)	ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವತಿಯಿಂದ ನಡೆಯುತ್ತಿರುವ ಶಾಲಾ ಕಾಲೇಜುಗಳನ್ನು ಸಮಾಜ ಕಲ್ಯಾಣ ಇಲಾಖೆ ಸುಪರ್ದಿಗೆ ನೀಡಲು ಸರ್ಕಾರ ಯೋಚಿಸಿದೆಯೇ; (ವಿವರಗಳನ್ನು ನೀಡುವುದು)	ವಿವಿಧ ಉದ್ದೇಶಗಳನ್ನು ಈಡೇರಿಸುವ ಸಲುವಾಗಿ ಸರ್ಕಾರದಲ್ಲಿ ಸಂಘ/ ಮಂಡಳಿ/ ನಿಗಮಗಳನ್ನು ಸ್ಥಾಪಿಸಲಾಗಿರುತ್ತದೆ. ಅದರಂತೆ ಸಮಾಜಕಲ್ಯಾಣ ಇಲಾಖೆಯಲ್ಲಿ ಸಹ ಗ್ರಾಮೀಣ ಪ್ರದೇಶದ ಬಡ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ಒದಗಿಸಲು ವಸತಿ ಶಾಲೆಗಳನ್ನು ಪ್ರಾರಂಭಿಸಿ ನಿರ್ವಹಿಸಲು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘವನ್ನು ಸ್ಥಾಪಿಸಲಾಗಿದೆ. ಈ ಸಂಘದ ವೃಂದ ಮತ್ತು ನೇಮಕಾತಿ ನಿಯಮಗಳಂತೆ ಬೋದಕ ಮತ್ತು ಬೋದಕೇತರ ಸಿಬ್ಬಂದಿಗಳನ್ನು ನೇಮಿಸಲಾಗುತ್ತಿದೆ. ಮಂಜೂರಾದ ಗ್ರೂಪ್-ಡಿ ಹುದ್ದೆಗಳನ್ನು ಆರ್ಥಿಕ ಇಲಾಖೆಯ ನಿರ್ದೇಶನದನ್ವಯ ಹೊರಗುತ್ತಿಗೆ ಆಧಾರದಲ್ಲಿ ನೇಮಿಸಿಕೊಳ್ಳಲಾಗುತ್ತಿದೆ. ಶಿಕ್ಷಣ ಇಲಾಖೆಯಿಂದ ನೇಮಿಸಿಕೊಂಡಿರುವ ಶಿಕ್ಷಕರುಗಳಿಗೆ ನೀಡುವ ವೇತನದಂತೆಯೇ ಸಂಘದ ಶಿಕ್ಷಕರುಗಳಿಗೂ ಸಹ ನೀಡಲಾಗುತ್ತಿದೆ. ಅಲ್ಲದೇ ಶಾಲೆ ಆವರಣದಲ್ಲಿ ಎಲ್ಲಾ ಬೋದಕ/ ಬೋದಕೇತರ ಸಿಬ್ಬಂದಿಗಳಿಗೆ ವಸತಿ ಸೌಕರ್ಯ ಮತ್ತು ಇತರೇ ಸವಲತ್ತುಗಳನ್ನು ನೀಡಲಾಗುತ್ತಿದೆ. ಸಂಘವು ಕರ್ನಾಟಕ ಸಹಕಾರ ಸಂಘಗಳ ನೋಂದಣಿ ಕಾಯ್ದೆ 1960 ರಡಿಯಲ್ಲಿ ಸ್ಥಾಪಿತವಾದ ಸಂಸ್ಥೆಯಾಗಿದ್ದು, ಸ್ವಾಯತ್ತ ಸಂಸ್ಥೆ / ಸಂಘ ಸಂಸ್ಥೆಗಳ ಸಿಬ್ಬಂದಿಗಳನ್ನು ರಾಜ್ಯ ಸಿವಿಲ್ ಸೇವೆಯಲ್ಲಿ ವಿಲೀನಗೊಳಿಸಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ.
ಆ)	ಸಮಾಜ ಕಲ್ಯಾಣ ಇಲಾಖೆ ವತಿಯಿಂದ ನಡೆಯುತ್ತಿರುವ ವಸತಿ ಶಿಕ್ಷಣ ಸಂಸ್ಥೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಪ್ರಾಂಶುಪಾಲರು ಹಾಗೂ ಶಿಕ್ಷಕರು ಸವಲತ್ತುಗಳಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಯಡಿ ಕಾರ್ಯನಿರ್ವಹಿಸುತ್ತಿರುವ ಖಾಯಂ ಪ್ರಾಂಶುಪಾಲರು ಹಾಗೂ ಶಿಕ್ಷಕರುಗಳಿಗೆ ಕೆ.ಜಿ.ಐ.ಡಿ., ಜ್ಯೋತಿ ಸಂಜೀವಿನಿ, ಒಂದು ವಿಶೇಷ ವೇತನ ಬಡ್ತಿ ಮತ್ತು ದಿನಾಂಕ: 01.04.2018 ರಿಂದ ಜಾರಿಗೆ ಬರುವಂತೆ ನಿವೃತ್ತಿ ಮತ್ತು ಮರಣ ಉಪದಾನ ಹಾಗೂ ಹೊರತುಪಡಿಸಿ ಶಿಕ್ಷಣ

ಇ)	ಬಂದಿದ್ದರೆ, ಶಿಕ್ಷಣ ಇಲಾಖೆಯಲ್ಲಿ ನೀಡುತ್ತಿರುವ ಎಲ್ಲಾ ಸವಲತ್ತುಗಳನ್ನು ಮೇಲ್ಕಂಡ ಎಲ್ಲಾ ಶಿಕ್ಷಕರುಗಳಿಗೆ ವಿಸ್ತರಿಸಲು ಸರ್ಕಾರಕ್ಕೆ ಇರುವ ತೊಂದರೆ ಏನು?	ಇಲಾಖೆಯ ಶಿಕ್ಷಕರುಗಳಿಗೆ ನೀಡುತ್ತಿರುವ ಎಲ್ಲಾ ಸವಲತ್ತುಗಳನ್ನು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಖಾಯಂ ಶಿಕ್ಷಕರುಗಳಿಗೆ ನೀಡಲಾಗುತ್ತಿದೆ. ಮುಂದುವರೆದು ನೂತನ ಪಿಂಚಣಿ ಯೋಜನೆಯನ್ನು ಸಹ ಶಿಕ್ಷಕರುಗಳು ಸೇವೆಗೆ ಸೇರಿದ ದಿನಾಂಕದಿಂದ ವಿಸ್ತರಿಸಲಾಗಿದೆ.

ಸಕಇ 108 ಮೊದೇಶಾ 2020

(ಗೋವಿಂದ ಎಂ. ಕಾರಜೋಳ)
ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ
ಮತ್ತು ಸಮಾಜ ಕಲ್ಯಾಣ ಸಚಿವರು